ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ – ೨೩

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೇ ಅಧಿವೇಶನ
(ಮುಂದುವರೆದ ಉಪವೇಶನಗಳು)
ಶುಕ್ರವಾರ, ದಿನಾಂಕ: ೧೬ನೇ ಜೂನ್, ೨೦೧೬.

---

## ಸಮೂಹ – V

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ಉನ್ನತ ಶಿಕ್ಷಣ ಸಚಿವರು

೪. ವಸತಿ ಸಚಿವರು

೫. ಸಣ್ಣ ಕೈಗಾರಿಕೆ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು

೭. ಸಾರಿಗೆ ಸಚಿವರು

೮. ಗಣಿ ಮತ್ತು ಭೂವಿಜ್ಞಾನ ಸಚಿವರು

---

## ಕಲ್ಲು ಗಣಿಗಾರಿಕೆ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೧ (೩೨೫) ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಜಿಲ್ಲೆ, ಉತ್ತರ ಅಪರ ತಾಲ್ಲೂಕು, ಬೆಟ್ಟ ಹಲಸೂರು ಗ್ರಾಮದ ಸರ್ವೆ ನಂ. ೧೦೦ರಲ್ಲಿನ ಕಲ್ಲುಗಣಿ ಗುತ್ತಿಗೆ ನಿಲ್ಲಿಸಿರುವುದರಿಂದ,

ನೂರಾರು ಕುಟುಂಬಗಳು ತೊಂದರೆಗೀಡಾಗುತ್ತಿರುವ, ಸ್ಫೋಟಕ ಬಳಸದೆ ದೈಹಿಕವಾಗಿ ಕಲ್ಲು ಗಣಿಗಾರಿಕೆ ನಡೆಸುವ ಷರತ್ತಿಗೆ ಒಳಪಡಿಸಿ, ಮರು ಸ್ಥಾಪಿಸಲು ಅರೆ ಸರ್ಕಾರಿ ಪತ್ರ ಎಲ್.ಎಸ್.ಸಿ.ಆರ್:೩.೧೧.೧೨ರಲ್ಲಿ ಗಣಿ ಇಲಾಖೆಯ ನಿರ್ದೇಶಕರಿಗೆ ಶಿಫಾರಸ್ಸು ಮಾಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಸದರಿ ಶಿಫಾರಸ್ಸಿನಂತೆ ಸದರಿ ಕಲ್ಲುಗಣಿಯನ್ನು ಕೂಡಲೇ ಮರು ಸ್ಥಾಪಿಸಿ, ನೂರಾರು ಕುಟುಂಬಗಳು ಬೀದಿ ಪಾಲಾಗಿರುವುದನ್ನು ತಪ್ಪಿಸಿ, ಉದ್ಯೋಗ ದೊರೆಯುವಂತಾಗಲು ಸರ್ಕಾರವು ಕೂಡಲೇ ಕೈಗೊಳ್ಳುವ ಕ್ರಮಗಳೇನು ?

## ಹೊಸ ಗ್ರಾಮ ಪಂಚಾಯತ್ ಕಟ್ಟಡಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೨ (೩೩೨೫) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಗ್ರಾಮ ಪಂಚಾಯತ್‌ಗಳಿಗೆ ಸ್ವಂತ ಕಟ್ಟಡ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೧೬–೧೭ನೇ ಸಾಲಿನಲ್ಲಿ ಹೊಸ ಗ್ರಾಮ ಪಂಚಾಯತ್ ಕಟ್ಟಡಗಳ ನಿರ್ಮಾಣಕ್ಕೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ;

(ಇ) ಪೂರ್ಣಗೊಂಡಿರುವ ಗ್ರಾಮ ಪಂಚಾಯತ್ ಕಟ್ಟಡಗಳು ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಕೆ.ಎಸ್.ಆರ್.ಟಿ.ಸಿ. ಮತ್ತು ಬಿ.ಎಂ.ಟಿ.ಸಿ. ನೌಕರರ ಬೇಡಿಕೆಗಳ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೩೩ (೩೨೫೫) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಎಸ್.ಆರ್.ಟಿ.ಸಿ. ಮತ್ತು ಬಿ.ಎಂ.ಟಿ.ಸಿ. ನೌಕರರು ತಮ್ಮ ಹಲವಾರು ಬೇಡಿಕೆಗಳನ್ನು ಮುಂದಿಟ್ಟು ಮುಷ್ಕರ ನಡೆಸಿದ ಸಂದರ್ಭದಲ್ಲಿ ಸರ್ಕಾರವು ಕೊಟ್ಟ ಆಶ್ವಾಸನೆಗಳೇನು ; (ವಿವರ ನೀಡುವುದು)

(ಆ) ಆಶ್ವಾಸನೆ ಕೊಟ್ಟ ರೀತ್ಯಾ ಅವರ ಬೇಡಿಕೆಗಳನ್ನು ಈಡೇರಿಸಲಾಗಿದೆಯೇ ; ಈಡೇರಿಸಿದ್ದಲ್ಲಿ, ಯಾವ ಯಾವ ಬೇಡಿಕೆಗಳನ್ನು ಈಡೇರಿಸಿದೆ ; ಬಾಕಿ ಇರುವ ಆಶ್ವಾಸನೆಗಳೆಷ್ಟು ; ಬಾಕಿ ಇರಲು ಕಾರಣವೇನು ; (ಬೇಡಿಕೆವಾರು ವಿವರ ನೀಡುವುದು)

(ಇ) ಬಾಕಿ ಇರುವ ಆಶ್ವಾಸನೆಗಳನ್ನು ಯಾವ ಕಾಲಮಿತಿಯೊಳಗೆ ಈಡೇರಿಸಲಾಗುವುದು ?

## ಕೇಂದ್ರದ ಅನುದಾನ ವಿನಿಯೋಗದಲ್ಲಿ ವಿಫಲತೆ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೪ (೩೩೧೮) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರ ಬಿಡುಗಡೆ ಮಾಡುವ ಅನುದಾನದ ಸಮರ್ಪಕ ಬಳಕೆಯಲ್ಲಿ ಇಲಾಖೆಯು ವಿಫಲವಾಗಿರುವುದು ನಿಜವೇ ;

(ಆ) ಕಳೆದ ೪ ವರ್ಷದಲ್ಲಿ ಕುಡಿಯುವ ನೀರು ೨೦೧೩–೧೪ನೇ ಹಣಕಾಸು ಯೋಜನೆ, ಸ್ವಚ್ಛಭಾರತ, ಉದ್ಯೋಗ ಖಾತ್ರಿ ಯೋಜನೆ ಸೇರಿದಂತೆ ವಿವಿಧ ಯೋಜನೆಗಳಿಗೆ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಹಾಗೂ ಖರ್ಚಾದ ಅನುದಾನವೆಷ್ಟು ;

(ಇ) ಕೇಂದ್ರ ಸರ್ಕಾರದ ಅನುದಾನ ದುರುಪಯೋಗ, ಅಕ್ರಮ ಠೇವಣಿಯಿರಿಸಿ ಯೋಜನೆಗಳಿಗೆ ಅನುದಾನವಿಲ್ಲದೆ ಯೋಜನೆಗಳ ಕುಂಠಿತ ಮತ್ತು ಅನುದಾನವನ್ನು ಸಂಪೂರ್ಣವಾಗಿ ವಿನಿಯೋಗಿಸಲು ರಾಜ್ಯ ಸರ್ಕಾರ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇಲಾಖೆಯ ವಿವಿಧ ಅವ್ಯವಹಾರ ಮತ್ತು ಲೋಪದ ತನಿಖೆಗಾಗಿ ಎಷ್ಟು ಸಮಿತಿಗಳನ್ನು ರಚಿಸಲಾಗಿದೆ ; ಯಾವಾಗ ರಚಿಸಲಾಗಿದೆ ; ಸಮಿತಿಯ ವರದಿಗಳೇನು ; ಅದರಂತೆ ಕೈಗೊಂಡ ಕ್ರಮಗಳೇನು ;

(ಉ) ಕೇಂದ್ರದ ಅನುದಾನಗಳನ್ನು ಸಮರ್ಪಕವಾಗಿ ಯಾವುದೇ ಲೋಪವಿಲ್ಲದೆ ಹಾಗೂ ಕಾಲಮಿತಿಯಲ್ಲಿ ವಿನಿಯೋಗಿಸಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ವೃಂದ ಹಾಗೂ ನೇಮಕಾತಿ ನಿಯಮಗಳ ತಿದ್ದುಪಡಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೩೫ (೩೩೩೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಸಿಬ್ಬಂದಿಗಳ ವೃಂದ ಹಾಗೂ ನೇಮಕಾತಿ ನಿಯಮಗಳ ವಿವರಗಳನ್ನು ಪುನರ್ ರೂಪಿಸುವ ಅಥವಾ ಬದಲಾಯಿಸುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುತ್ತಿದೆಯೇ ; ಈ ರೀತಿ ''ವೃಂದ ಹಾಗೂ ನೇಮಕಾತಿ ನಿಯಮಗಳನ್ನು'' ರಚಿಸುವ ತಿದ್ದುಪಡಿ ಮಾಡುವ ಸರ್ಕಾರದ ನಿರ್ಧಾರಕ್ಕೆ ಕಾರಣವೇನು ;

(ಆ) ''ವೃಂದ ಹಾಗೂ ನೇಮಕಾತಿ ನಿಯಮಗಳ'' ತಿದ್ದುಪಡಿಯ ಕುರಿತು ಸರ್ಕಾರದ ಚಿಂತನೆ ಹಾಗೂ ಆಲೋಚನೆಗಳೇನು ; ಯಾವ ಪ್ರಮುಖ ಬದಲಾವಣೆಗಳನ್ನು ತರಲು ಇಚ್ಛಿಸಿದೆ ; ಈ ನಿಟ್ಟಿನಲ್ಲಿ ಯಾವ ಕಾಲಮಿತಿಯೊಳಗೆ ಸರ್ಕಾರ ಬದಲಾವಣೆಯನ್ನು ತರಲಾಗುವುದು ;

(ಇ) ಪ್ರೊ. ಗೋವಿಂದ ಸಮಿತಿಯ ವರದಿಯ ಅನುಗುಣವಾಗಿ ''ವೃಂದ ಹಾಗೂ ನೇಮಕಾತಿ ನಿಯಮಗಳ'' ತಿದ್ದುಪಡಿ ಮಾಡಲಾಗುತ್ತಿದೆಯೇ ;

(ಈ) ೧ನೇ ತರಗತಿಯಿಂದ ೧೨ನೇ ತರಗತಿಯವರೆಗೆ ಬೋಧಿಸುತ್ತಿರುವ ಶಿಕ್ಷಕ/ ಉಪನ್ಯಾಸಕರ ''ವೃಂದ ಹಾಗೂ ನೇಮಕಾತಿ ನಿಯಮಗಳ'' ಸಮಗ್ರ ತಿದ್ದುಪಡಿ ತರುವ ಉದ್ದೇಶ ಸರ್ಕಾರಕ್ಕಿದೆಯೇ ;

(ಉ) ಈಗಿರುವ ಶಿಕ್ಷಣ ಸಂರಚನೆಯನ್ನು ಬದಲಾಯಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಗ್ರಾಮ ಪಂಚಾಯಿತಿ ವತಿಯಿಂದ ವಿವಿಧ ಯೋಜನೆಗಳ ಅನುಷ್ಠಾನದ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೩೬ (೩೨೭೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ತುಮಕೂರು ಜಿಲ್ಲೆ, ತಿಪಟೂರು ತಾಲ್ಲೂಕು, ಬಿಳಿಗೆರೆ ಗ್ರಾಮ ಪಂಚಾಯಿತಿಗೆ ಕಳೆದ ಮೂರು ವರ್ಷಗಳಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಕಾರ್ಯಕ್ರಮ, ಪ್ರಧಾನ ಮಂತ್ರಿ ಗ್ರಾಮೀಣ ರಸ್ತೆ ಯೋಜನೆ ಹಾಗೂ ನಿರ್ಮಲ ಭಾರತ್ ಅಭಿಯಾನ್ ಯೋಜನೆಯಡಿಯಲ್ಲಿ ಎಷ್ಟು ಹಣ ಬಿಡುಗಡೆಯಾಗಿರುತ್ತದೆ ; ಎಷ್ಟು ಹಣ ಖರ್ಚು ಮಾಡಲಾಗಿರುತ್ತದೆ ;

(ಆ) ತಿಪಟೂರು ತಾಲ್ಲೂಕು, ಬಿಳಿಗೆರೆ ಗ್ರಾಮ ಪಂಚಾಯಿತಿಗೆ ಪರಿಶಿಷ್ಟ ಜಾತಿ ಹಾಗೂ ಗಿರಿಜನ ಯೋಜನೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಯೋಜನೆಗಳು ಮಂಜೂರಾಗಿರುತ್ತವೆ ; ಆ ಪೈಕಿ ಎಷ್ಟು ಯೋಜನೆಗಳು ಅನುಷ್ಠಾನಗೊಂಡಿವೆ ; ಬಾಕಿ ಇರುವ ಯೋಜನೆಗಳು ಯಾವುವು ; ಫಲಾನುಭವಿಗಳ ಸಂಖ್ಯೆ ಎಷ್ಟು ; (ಯೋಜನಾವಾರು ವಿವರ ನೀಡುವುದು)

(ಇ) ತಿಪಟೂರು ತಾಲ್ಲೂಕು, ಬಿಳಿಗೆರೆ ಗ್ರಾಮ ಪಂಚಾಯಿತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಗ್ರಾಮ ಸಭೆಗಳನ್ನು ನಡೆಸಲಾಗಿದೆ ; ಪಂಚಾಯಿತಿಯ ಎಷ್ಟು ಸಭೆಗಳನ್ನು ನಡೆಸಲಾಗಿದೆ ; ಸದರಿ ಸಭೆಗಳ ಮಾಹಿತಿಯನ್ನು ತಾಲ್ಲೂಕು ಪಂಚಾಯಿತಿಗೆ ಮತ್ತು ಜಿಲ್ಲಾ ಪಂಚಾಯಿತಿಗೆ ನೀಡಲಾಗಿದೆಯೇ ;

(ಈ) ತಿಪಟೂರು ತಾಲ್ಲೂಕು, ಬಿಳಿಗೆರೆ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕಳೆದ ಮೂರು ವರ್ಷಗಳಲ್ಲಿ ಸದರಿ ಪಂಚಾಯಿತಿಯ ಲೆಕ್ಕಪತ್ರಗಳನ್ನು ಸಲ್ಲಿಕೆ ಮಾಡಿರುತ್ತಾರೆಯೇ ; ಮಾಡದೇ ಇದ್ದಲ್ಲಿ ಕಾರಣವೇನು ; ಸದರಿ ಪಂಚಾಯಿತಿಗೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾ ಅಧಿಕಾರಿ ಮತ್ತು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಷ್ಟು ಬಾರಿ ಭೇಟಿ ನೀಡಿ ಪರಿಶೀಲನೆ ನಡೆಸಿರುತ್ತಾರೆ ?

## ನಮ್ಮ ಗ್ರಾಮ – ನಮ್ಮ ರಸ್ತೆ ಯೋಜನೆಯಡಿ ನಿರ್ಮಾಣಗೊಂಡಿರುವ ರಸ್ತೆಗಳ ಕಳಪೆ ಕಾಮಗಾರಿಯ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೭ (೩೩೦೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ನಮ್ಮ ಗ್ರಾಮ–ನಮ್ಮ ರಸ್ತೆ ಯೋಜನೆಯಡಿ ನಿರ್ಮಾಣಗೊಂಡಿರುವ ಡಾಂಬರ್ ರಸ್ತೆಗಳು ನಿರ್ವಹಣೆಯಿಲ್ಲದೆ ೬ ತಿಂಗಳಲ್ಲೇ ಹಾಳಾಗಿ ರಸ್ತೆ ಸಂಚಾರ ದುಸ್ತರವಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ರಸ್ತೆಗಳ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ೨೦೧೪–೧೫, ೨೦೧೫–೧೬, ೨೦೧೬–೧೭ನೇ ಸಾಲಿಗೆ ಸದರಿ ಯೋಜನೆಯಡಿ ಇಲಾಖೆಗೆ ಸರ್ಕಾರ ಹಂಚಿಕೆ ಮಾಡಿದ್ದ ಅನುದಾನವೆಷ್ಟು ; ಅದರಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಬಾಕಿ ಇರುವ ಅನುದಾನವೆಷ್ಟು ; (ವರ್ಷಾವಾರು ವಿವರ ನೀಡುವುದು)

(ಈ) ೨೦೧೪–೧೫, ೨೦೧೫–೧೬, ೨೦೧೬–೧೭ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ವಿವಿಧ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; ಅದರಲ್ಲಿ ಬಳಕೆಯಾದ ಅನುದಾನವೆಷ್ಟು ; ಉಳಿದ ಅನುದಾನವೆಷ್ಟು ; (ವಿವರ ನೀಡುವುದು)

(ಉ) ೨೦೧೬–೧೭ನೇ ಸಾಲಿಗೆ ಬಜೆಟ್‌ನಲ್ಲಿ ಘೋಷಣೆಯಾದ ಇಲಾಖೆಯ ಯೋಜನೆಗಳಾವುವು ; ಅವುಗಳಲ್ಲಿ ಅನುಷ್ಠಾನಗೊಂಡ ಯೋಜನೆಗಳಾವುವು ; ಅಪೂರ್ಣಗೊಂಡ ಯೋಜನೆಗಳಾವುವು ; ಅವುಗಳಿಗೆ ಹಂಚಿಕೆಯಾಗಿದ್ದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ? (ವಿವರ ನೀಡುವುದು)

## ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದ ಯೋಜನೆಯಲ್ಲಿ ನಾಟ್ ಓಕೆ ಆದ ಮನೆಗಳ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೩೩೮ (೩೨೬೬) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦ ರಿಂದ ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದ ಯೋಜನೆಯಡಿಯಲ್ಲಿ ನಿರ್ಮಿಸಲ್ಪಟ್ಟ ಮನೆಗಳಲ್ಲಿ ಎಷ್ಟು ಫಲಾನುಭವಿಗಳ ಮನೆಗಳ ಫೋಟೋ ಜಿಪಿಎಸ್ ನಾಟ್ ಓಕೆ ಆಗಿ ತಿರಸ್ಕೃತವಾಗಿರುತ್ತವೆ ; (ಜಿಲ್ಲಾವಾರು ಅಂಕಿಅಂಶಗಳನ್ನು ನೀಡುವುದು)

(ಆ) ಸದರಿ ನಾಟ್‌ಓಕೆ ಆದ ಮನೆಗಳನ್ನು ಸಂಪೂರ್ಣಗೊಳಿಸಿದ ಫಲಾನುಭವಿಗಳು ಅನುದಾನವನ್ನು ಪಡೆಯಲು ಹರಸಾಹಸ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮಗಳೇನು ;

(ಇ) ಅನುದಾನವನ್ನು ಬಿಡುಗಡೆ ಮಾಡದೇ ಇರುವ ಪಕ್ಷದಲ್ಲಿ ಸದರಿ ಫಲಾನುಭವಿಗಳಿಗೆ ಸರ್ಕಾರದಿಂದ ಯಾವ ರೀತಿ ಸರಿಪಡಿಸಿಕೊಳ್ಳಲು ಕಾರ್ಯಸೂಚಿಗಳನ್ನು ನೀಡಲಾಗಿದೆ ? (ವಿವರಗಳನ್ನು ನೀಡುವುದು)

## ರಾಜ್ಯದಲ್ಲಿ ೧ ರಿಂದ ೧೦ನೇ ತರಗತಿಯವರೆಗೆ ಇರುವ ಗಂಡು ಮತ್ತು ಹೆಣ್ಣು ಮಕ್ಕಳ ಶಾಲೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೩೩೯ (೩೨೪೦+೩೨೩೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧ ರಿಂದ ೭ನೇ ತರಗತಿಯವರೆಗೆ ಇರುವ ಶಾಲೆಗಳ ಸಂಖ್ಯೆ ಎಷ್ಟು ; ಕನ್ನಡ ಮಾಧ್ಯಮದ ಗಂಡು ಮಕ್ಕಳ ಶಾಲೆ / ಹೆಣ್ಣು ಮಕ್ಕಳ ಶಾಲೆಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿ ೮ ರಿಂದ ೧೦ನೇ ತರಗತಿಯವರೆಗೆ ಇರುವ ಶಾಲೆಗಳ ಸಂಖ್ಯೆ ಎಷ್ಟು ; ಕನ್ನಡ ಮಾಧ್ಯಮದ ಗಂಡು ಮಕ್ಕಳ ಶಾಲೆ, ಹೆಣ್ಣು ಮಕ್ಕಳ ಶಾಲೆಗಳ ಸಂಖ್ಯೆ ಎಷ್ಟು ;

(ಇ) ರಾಜ್ಯದಲ್ಲಿರುವ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಕೊಠಡಿಗಳು ಎಷ್ಟು ಇರಬೇಕು ; ಒಂದು ಕೊಠಡಿಯಲ್ಲಿ ಎಷ್ಟು ಮಕ್ಕಳಿರಬೇಕು ; ಈಗ ಎಷ್ಟು ಕೊಠಡಿಗಳಿವೆ ;

(ಈ) ಈ ಕೊಠಡಿಗಳಲ್ಲಿ ಎಷ್ಟು ಸರಿಯಾಗಿವೆ ; ಎಷ್ಟು ದುರಸ್ಥಿಯಲ್ಲಿವೆ ; ಎಷ್ಟು ಶಿಥಿಲಾವಸ್ಥೆಯಲ್ಲಿವೆ ; ನೆಲಸಮವಾಗಿವೆ ; (ವಿವರ ನೀಡುವುದು)

(ಉ) ಹಾವೇರಿ ಜಿಲ್ಲೆಯ ೭ ತಾಲ್ಲೂಕುಗಳಲ್ಲಿ ಇರುವ ಶಾಲೆಗಳ ಸಂಖ್ಯೆ ಎಷ್ಟು ; ಕೊಠಡಿಗಳ ಸಂಖ್ಯೆಗೆ ಅನುಗುಣವಾಗಿ ಎಷ್ಟು ಮಕ್ಕಳು ಇರಬೇಕು, ಈಗ ಎಷ್ಟು ಮಕ್ಕಳು ಇದ್ದಾರೆ ; ಇದರಲ್ಲಿ ದುರಸ್ಥಿಯಲ್ಲಿರುವ ಕೊಠಡಿಗಳು ಎಷ್ಟು ; ಶಿಥಿಲಾವಸ್ಥೆಯಲ್ಲಿರುವುವು ಎಷ್ಟು ; ನೆಲಸಮಗೊಳಿಸಿರುವುವು ಎಷ್ಟು ; ಈಗ ಮಕ್ಕಳ ಪರಿಸ್ಥಿತಿ ಏನು ? (ಕೊಠಡಿಗಳ ಸಂಖ್ಯೆ ಮಕ್ಕಳ ಸಂಖ್ಯೆ ತಾಲ್ಲೂಕುವಾರು ಮಾಹಿತಿ ನೀಡುವುದು)

## ಪದವೀಧರರ ಘಟಿಕೋತ್ಸವದ ಪ್ರಮಾಣ ಪತ್ರದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೦ (೩೨೪೧) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಎ., ಬಿ.ಎಸ್ಸಿ ಮತ್ತು ಬಿ.ಕಾಂ. ಪದವೀಧರರು ಘಟಿಕೋತ್ಸವದ ಪ್ರಮಾಣ ಪತ್ರವನ್ನು ಪಡೆಯಲು ಚಡಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಉತ್ತೀರ್ಣರಾದ ಪದವೀಧರರ ವಿದ್ಯಾರ್ಥಿಗಳು ಘಟಿಕೋತ್ಸವದ ಪ್ರಮಾಣ ಪತ್ರವನ್ನು ಪಡೆಯಲು ಪ್ರಸ್ತುತ ಇರುವ ನಿಯಮವನ್ನು ಸಡಿಲಗೊಳಿಸಿ ವರ್ಷಕ್ಕೆ ೩/೪ ಬಾರಿ ಘಟಿಕೋತ್ಸವದ ಪ್ರಮಾಣ ಪತ್ರದ ಅರ್ಜಿಯನ್ನು ಸಲ್ಲಿಸಲು ಇರುವ ನಿಯಮವನ್ನು ಸಡಿಲಗೊಳಿಸಲು ಇರುವ ತೊಂದರೆ ಏನು ;

(ಇ) ಪದವೀಧರರ ವಿದ್ಯಾರ್ಥಿಗಳು ಘಟಿಕೋತ್ಸವದ ಪ್ರಮಾಣ ಪತ್ರವನ್ನು ಪಡೆಯಲು ತತ್ಕಾಲ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಸ್ತುತ ಇರುವ ಸಾವಿರಾರು ರೂ.ಗಳ ಶುಲ್ಕವನ್ನು ಸಡಿಲಗೊಳಿಸಿ, ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಶುಲ್ಕವನ್ನು ನಿಗದಿಪಡಿಸಿ ಅನುಕೂಲ ಮಾಡಿಕೊಡಬಹುದೇ ? (ವಿವರ ನೀಡುವುದು)

## ವಿಜಯಪುರ ಕೈಗಾರಿಕೆ ವಸಾಹತುವಿನಲ್ಲಿರುವ ಜಮೀನಿನ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೧ (೩೨೩೮) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರದಲ್ಲಿ ಕೈಗಾರಿಕೆ ಸಲುವಾಗಿ ವಸಾಹತುವಿನಲ್ಲಿರುವ ಜಮೀನು ಎಷ್ಟು ; ಇವುಗಳಲ್ಲಿ ಮಂಜೂರಾದ ಜಮೀನಿನ ವಿವರ ಹಾಗೂ ಖಾಲಿ ಇರುವ ಜಮೀನಿನ ವಿವರ ನೀಡುವುದು ;

(ಆ) ವಿಜಯಪುರದಲ್ಲಿ ಇರುವ ಕೈಗಾರಿಕೆ ವಸಾಹತುವಿನಲ್ಲಿ ಇರುವ ಜಮೀನಿನಲ್ಲಿ ಸ್ಥಾಪನೆಯಾದ ಕೈಗಾರಿಕೆಗಳೆಷ್ಟು ; (ವಿವರ ನೀಡುವುದು) ಮತ್ತು ಇವುಗಳಿಗೆ ಯಾವ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ; (ವಿವರ ನೀಡುವುದು)

(ಇ) ವಿಜಯಪುರದಲ್ಲಿ ಕೈಗಾರಿಕೆ ವಸಾಹತು ಪ್ರದೇಶದಲ್ಲಿ ಕೈಗಾರಿಕೆ ಸ್ಥಾಪನೆ ಮಾಡುವ ಸಲುವಾಗಿ ಜಮೀನಿನ ಬೇಡಿಕೆಗಾಗಿ ಸಲ್ಲಿಸಿದ ವಿವರ ನೀಡುವುದು ಹಾಗೂ ಇದಕ್ಕೆ ಇನ್ನೂ ಎಷ್ಟು ಜಮೀನು ಬೇಕಾಗುವುದು ;

(ಈ) ವಿಜಯಪುರದಲ್ಲಿ ಕೈಗಾರಿಕೆ ವಸಾಹತು ಅಭಿವೃದ್ಧಿ ಮಾಡಲು ಸರ್ಕಾರ ಕಳೆದ ೧೦ ವರ್ಷಗಳಲ್ಲಿ ಖರ್ಚು ಮಾಡಿದ ಹಣ ಎಷ್ಟು ;

(ಉ) ವಿಜಯಪುರ ಕೈಗಾರಿಕೆ ವಸಾಹತು ಪ್ರದೇಶದಲ್ಲಿ ಮಂಜೂರಾದ ಜಮೀನಿನಲ್ಲಿ ಉದ್ದೇಶಿತ ಕೈಗಾರಿಕೆಯನ್ನು ಪ್ರಾರಂಭಿಸಲಾಗಿದೆಯೇ ; ನಿಗದಿತ ಸಮಯದಲ್ಲಿ ಕೈಗಾರಿಕೆ ಪ್ರಾರಂಭಿಸದೆ ಇರುವ ಉಳಿದ ಜಮೀನು ಎಷ್ಟು ; (ವಿವರ ನೀಡುವುದು) ಅದಕ್ಕೆ ತೆಗೆದುಕೊಂಡ ಕ್ರಮಗಳ ವಿವರ ನೀಡುವುದು ;

(ಊ) ವಿಜಯಪುರದಲ್ಲಿ ಕೈಗಾರಿಕಾ ಪ್ರದೇಶವನ್ನು ವಿಸ್ತರಣೆ ಮಾಡುವ ಪ್ರಸ್ತಾವನೆ ಇದೆಯೇ ; ಹಾಗಿದ್ದಲ್ಲಿ, ಎಷ್ಟು ಜಮೀನಿನ ಅವಶ್ಯಕತೆ ಇದೆ ; ಅದಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮ ಏನು ; (ವಿವರ ನೀಡುವುದು)

(ಋ) ಸದರಿ ಕೈಗಾರಿಕೆ ಪ್ರದೇಶದಲ್ಲಿ ಹೊಸದಾಗಿ ಕೈಗಾರಿಕೆ ಅಥವಾ ಉದ್ದಿಮೆ ಆರಂಭಿಸಲು ಜಮೀನಿಗಾಗಿ ಎಷ್ಟು ಅರ್ಜಿಗಳು ಬಂದಿರುತ್ತವೆ ; (ವಿವರ ನೀಡುವುದು) ಪ್ರಾರಂಭಿಸಲು ಉದ್ದೇಶಿಸಿರುವ ಉದ್ದಿಮೆ/ಕೈಗಾರಿಕೆ ಹಾಗೂ ಅದಕ್ಕೆ ಅಗತ್ಯವಾಗಿ ಬೇಕಾಗಿರುವ ಜಮೀನಿನ ವಿವರ ನೀಡುವುದು ;

(ಎ) ವಿಜಯಪುರದಲ್ಲಿ ಇಲ್ಲಿಯವರೆಗೆ ಉದ್ದಿಮೆದಾರರಿಗೆ ಇಲಾಖೆಯಿಂದ ಯಾವ ರೀತಿಯಾದ ತಾಂತ್ರಿಕತೆ ಹಾಗೂ ಇನ್ನಿತರ ಸಹಾಯ ನೀಡಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

## ಶಿವಮೊಗ್ಗ ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸಲು ಸ್ಥಳದ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೨ (೩೨೯೨) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸಲು ಗುರುತಿಸಲಾಗಿರುವ ಸ್ಥಳ ಹಾಗೂ ವಶಪಡಿಸಿಕೊಳ್ಳಲಾಗಿರುವ ಜಮೀನು ಎಷ್ಟು ; (ವಿವರ ನೀಡುವುದು)

(ಆ) ಈಗಾಗಲೇ ಬೃಹತ್ ಕೈಗಾರಿಕೆಗಳಿಗೆ ವಶಪಡಿಸಿಕೊಂಡು ಮೀಸಲು ಇಟ್ಟಿರುವ ಸ್ಥಳ ಯಾವುದು ? (ವಿವರ ಒದಗಿಸುವುದು)

## ತುರುವೇಕೆರೆ ಕ್ಷೇತ್ರಕ್ಕೆ ಬಸವ ವಸತಿ ಮನೆ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೪೩ (೩೩೪೫) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ಕ್ಷೇತ್ರದಲ್ಲಿ ಬರುವ ಗ್ರಾಮ ಪಂಚಾಯ್ತಿಗಳಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ನೀಡಿರುವ ಬಸವ ವಸತಿ ಮನೆಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯಿತಿವಾರು ಹಾಗೂ ಪ್ರತಿ ಗ್ರಾಮವಾರು ಫಲಾನುಭವಿಗಳ ಹೆಸರು ಸಮೇತ ವಿವರ ನೀಡುವುದು)

(ಆ) ಆರ್ಥಿಕವಗಿ ಹಿಂದುಳಿದ ಬಡವರು ನಿವೇಶನವಿದ್ದು, ಮನೆ ಇಲ್ಲದೆ ಎಷ್ಟು ವರ್ಷಗಳಿಂದ ಕಾಯುತ್ತಿದ್ದಾರೆ ;

(ಇ) ಹಾಗಿದ್ದಲ್ಲಿ, ಎಷ್ಟು ದಿನಗಳಲ್ಲಿ ಆ ಬಡವರಿಗೆ ಮನೆ ನೀಡಲಾಗುವುದು ;

(ಈ) ಪಂಚಾಯ್ತಿವಾರು ಮನೆ ಸಿಗದ ಫಲಾನುಭವಿಗಳಿಗೆ ವಿಶೇಷವಾಗಿ ಮನೆ ನೀಡಲು ಸರ್ಕಾರ ಕೈಗೊಳ್ಳುವ ಕ್ರಮವೇನು ? (ವಿವರ ನೀಡುವುದು)

## ಲಲಿತ ಕಲಾ ವಿಶ್ವವಿದ್ಯಾಲಯ ಸ್ಥಾಪನೆ ಕುರಿತು

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೩೪೪ (೩೨೫೧) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕು ಐತಿಹಾಸಿಕ ನಗರವಾಗಿರುವುದರಿಂದ ಈ ತಾಲ್ಲೂಕಿನಲ್ಲಿ "ಲಲಿತ ಕಲಾ ವಿಶ್ವವಿದ್ಯಾಲಯ" ಸ್ಥಾಪನೆಗೆ ವಿಶೇಷ ಅಧಿಕಾರಿಗಳನ್ನು ನೇಮಕ ಮಾಡಲಾಗಿರುವುದು ನಿಜವೇ ;

(ಆ) ಈ ಲಲಿತ ಕಲಾ ವಿಶ್ವವಿದ್ಯಾಲಯ ಸ್ಥಾಪನೆಗೆ ೪೨೩ ಎಕರೆ ಜಮೀನನ್ನು ಬಾದಾಮಿ ತಾಲ್ಲೂಕಿನಲ್ಲಿ ಈಗಾಗಲೇ ಗುರುತಿಸಿದ್ದು, ಈ ಕುರಿತು ಸರಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಇದು ದೇಶದಲ್ಲಿಯೇ ಮೊದಲನೆಯ ವಿಶ್ವವಿದ್ಯಾಲಯವೆಂಬ ಹೆಗ್ಗಳಿಕೆಗೆ ಕರ್ನಾಟಕ ಪಾತ್ರವಾಗಲಿದ್ದು, ಈ ನಿಟ್ಟಿನಲ್ಲಿ ವಿಶ್ವವಿದ್ಯಾಲಯವನ್ನು ಸ್ಥಾಪನೆ ಮಾಡಲಾಗುವುದು ಯಾವಾಗ ; ಈ ಸಂಬಂಧ ತೆಗೆದುಕೊಂಡ ಕ್ರಮಗಳೇನು ?

## ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಇ-ಸ್ವತ್ತು ಯೋಜನೆ ಬಗ್ಗೆ

**ಶ್ರೀ ಕಾಂತರಾಜು (ಬಿಎಮ್‌ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೫ (೩೨೧೮) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇ–ಸ್ವತ್ತು ಯೋಜನೆಯನ್ನು ಗ್ರಾಮೀಣ ಜನರ ಅನುಕೂಲಕ್ಕಾಗಿ ಜಾರಿಗೆ ತಂದಿದ್ದು, ಇದರಿಂದ ಅನಾನುಕೂಲತೆಗಳು ಹೆಚ್ಚಾಗಿ ಅನೇಕ ಗೊಂದಲಗಳು ಉಂಟಾಗಿ ಕುಟುಂಬದ ಕಲಹಗಳು ಹೆಚ್ಚುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಬಂದಿದ್ದಲ್ಲಿ, ಇ–ಸ್ವತ್ತು ಪದ್ಧತಿಯನ್ನು ಸರಳ ಮತ್ತು ಸುಲಲಿತಗೊಳಿಸಿ, ಗ್ರಾಮೀಣ ಜನರ ಅನುಕೂಲಕ್ಕಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕ್ರಮಬದ್ಧ ಆಸ್ತಿಗಳಿಗೆ ನಿಗದಿತ ನಮೂನೆ–೯ ಹಾಗೂ ೧೧ಎ ರಲ್ಲಿ ಮತ್ತು ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಮೂನೆ ೧೧ಬಿ ರಲ್ಲಿ ಇ–ಸ್ವತ್ತು ತಂತ್ರಾಂಶದ ಮೂಲಕ ವಿತರಿಸಲು ಆಯಾ ಪಂಚಾಯಿತಿಯ ಪಿ.ಡಿ.ಓ.ಗಳು ಅವ್ಯವಹಾರದಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇಂತಹ ಅಧಿಕಾರಿಗಳ ಬಗ್ಗೆ ಇಲ್ಲಿಯತನಕ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ರೈತರು ಮತ್ತು ಸಾರ್ವಜನಿಕರು ಅವರ ಕಷ್ಟದ ಸಮಯದಲ್ಲಿ ಆಸ್ತಿಗಳ ನೋಂದಣಿ, ಮಾರಾಟ ಮುಂತಾದ ವಹಿವಾಟುಗಳನ್ನು ಸರಾಗವಾಗಿ ವಿಲೇವಾರಿ ಮಾಡಲು ಇ–ಸ್ವತ್ತು ಪದ್ಧತಿಯಿಂದ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದರೂ ಸಹ ಇದುವರೆವಿಗೂ ಈ ಬಗ್ಗೆ ಸರಳೀಕರಣಗೊಳಿಸಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ ; (ವಿವರ ನೀಡುವುದು)

(ಊ) ಇ–ಸ್ವತ್ತು ಯೋಜನೆ ಮತ್ತು ಇ–ಸ್ವತ್ತು ಪದ್ಧತಿಯ ಬಗ್ಗೆ ಇದುವರೆಗೂ ಸರ್ಕಾರ ಹೊರಡಿಸಿರುವ ಆದೇಶ/ಅಧಿಸೂಚನೆ/ಸುತ್ತೋಲೆಗಳಾವುವು ? (ಪ್ರತಿಯನ್ನು ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು. ಕಾ.ಸೂ. 246 – ಪಿ5